ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಕಲಬುರಗಿ ಜಿಲ್ಲೆ ಜೇವರ್ಗಿ ತಾಲ್ಲೂಕಿನ ಸೋಮನಾಥ ಹಳ್ಳಿಗೆ ಸಾರಿಗೆ ಸೌಲಭ್ಯದ ಬಗ್ಗೆ

ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

497(383) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆ ಜೇವರ್ಗಿ ತಾಲ್ಲೂಕಿನ ಸೋಮನಾಥ ಹಳ್ಳಿಗೆ ಇದುವರೆಗೂ ಸಾರಿಗೆ ಬಸ್ ಸೌಕರ್ಯವಿಲ್ಲದೆ ಗ್ರಾಮದ ಜನರು, ವಿದ್ಯಾರ್ಥಿಗಳು ಹಾಗೂ ಆಸ್ಪತ್ರೆಗೆ ಹೋಗುವ ರೋಗಿಗಳು ಮುಖ್ಯ ರಸ್ತೆಯವರೆಗೂ ನಡೆದುಕೊಂಡೇ ಬರುವ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಹಳ್ಳಿಗೆ ಬಸ್ ಸೌಕರ್ಯವನ್ನು ಕಲ್ಪಿಸುವುದು ಯಾವಾಗ;

(ಇ) ಕಲಬುರಗಿ ಜಿಲ್ಲೆಯಲ್ಲಿ ಬಸ್ ಸೌಕರ್ಯವಿಲ್ಲದ ಗ್ರಾಮಗಳ ಸಂಖ್ಯೆ ಎಷ್ಟು ;

(ಈ) ಇಂತಹ ಗ್ರಾಮಗಳಿಗೆ ಬಸ್ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಯಾವಾಗ ? (ವಿವರ ನೀಡುವುದು)